155 ಡಿ ಕ್ಯೂ ನಿ:72-(52)
4ka

**ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಕೆ.ಪ್ರತಾಪ್‌ಸಿಂಹ ನಾಯಕ್ ರವರು ನಿಯಮ-72ರ ಅಡಿಯಲ್ಲಿ ಪ್ರಸ್ತಾಪಿಸಿರುವ ಸೂಚನೆಗೆ ಉತ್ತರ.**

**ವಿಷಯ**: ರಾಜ್ಯದಲ್ಲಿ "ಡಿಜಿಟಲ್ ಅರೆಸ್ಟ್" ನಿಂದಾಗಿ ಅಮಾಯಕರ ಬ್ಯಾಂಕ್ ಖಾತೆಯಿಂದ ಕೋಟಿ ಕೋಟಿ ರೂಪಾಯಿ ವಂಚನ ಆಗುತ್ತಿದ್ದು, ನೊಂದವರು ಮಾನಸಿಕವಾಗಿ ಕುಗ್ಗುತ್ತಿರುವ ಪ್ರಕರಣಗಳು ದಿನೇದಿನೇ ಹೆಚ್ಚಾಗುತ್ತಿವೆ. ಕೋಟ್ಯಾಂತರ ರೂಪಾಯಿಗಳ ಹಣದ ಸುಲಿಗೆ ಅವ್ಯಾಹತವಾಗಿ ನಡೆಯುತ್ತಿದ್ದು ಇದನ್ನು ತಡೆಯಲು ಸರ್ಕಾರ ಸಂಪೂರ್ಣವಾಗಿ ವಿಫಲವಾಗಿದೆ. "ಡಿಜಿಟಲ್ ಅರೆಸ್ಟ್" ವಂಚನೆಯ ಪ್ರಕರಣಗಳ ದಿನೇ ದಿನೇ ಹೆಚ್ಚಾಗುತ್ತಿದ್ದು, ಹಲವಾರು ಅಮಾಯಕರು ಈ ವಂಚನೆಯ ಜಾಲಕ್ಕೆ ಸಿಲುಕಿ ಮಾನಸಿಕವಾಗಿ ಹಾಗೂ ಆರ್ಥಿಕವಾಗಿ ಅತ್ಯಂತ ಸಂಕಷ್ಟದ ಪರಿಸ್ಥಿತಿಗೆ ಸಿಲುಕುತ್ತಿರುವುದನ್ನ ತಡೆಯುವ ನಿಟ್ಟಿನಲ್ಲಿ ಸರ್ಕಾರ ಯಾವುದೇ ಪರಿಣಾಮಕಾರಿ ಕ್ರಮಗಳನ್ನು ವಹಿಸದೇ ಇರುವುದರಿಂದ ಉಂಟಾಗಿರುವ ಗಂಭೀರ ಸಮಸ್ಯೆ ಕುರಿತು ಮಾನ್ಯ ಗೃಹ ಸಚಿವರ ಗಮನವನ್ನು ಸೆಳೆಯಲು ಬಯಸುತ್ತೇನೆ.

**ಉತ್ತರ:**

ರಾಜ್ಯದಲ್ಲಿ ಡಿಜಿಟಲ್ ಅರೆಸ್ಟ್ ವಂಚನೆಯ ಪ್ರಕರಣಗಳು ವರದಿಯಾದ ಕೂಡಲೇ ಐಟಿ ಮತ್ತು ಇತರೆ ಸಂಬಂಧಿತ ಕಾನೂನು/ಕಾಯ್ದೆ ಅಡಿಯಲ್ಲಿ ಪ್ರಕರಣಗಳನ್ನು ದಾಖಲಿಸಿಕೊಂಡು, ತನಿಖೆಯನ್ನು ಕೈಗೊಳ್ಳಲಾಗುತ್ತಿದೆ.

ರಾಜ್ಯದಲ್ಲಿ 2023, 2024 ಮತ್ತು 2025 (ಫೆಬ್ರುವರಿ) ತಿಂಗಳ ಅಂತ್ಯದ ವರೆಗೆ ವರದಿಯಾಗಿರುವ "ಡಿಜಿಟಲ್ ಅರೆಸ್ಟ್" ವಂಚನೆಯ ಪ್ರಕರಣಗಳು ಮತ್ತು ವಂಚಕರಿಂದ ಸಾರ್ವಜನಿಕರು ಕಳೆದುಕೊಂಡಿರುವ ಹಣದ ವಿವರಗಳು ಈ ಕೆಳಕಂಡಂತಿದೆ:

| ವರ್ಷ | ದಾಖಲಾದ ಪ್ರಕರಣಗಳು | ವಂಚಕರಿಂದ ಸಾರ್ವಜನಿಕರು ಕಳೆದುಕೊಂಡ ಹಣದ ಮೊತ್ತ ₹ | ವಂಚಕರಿಂದ ಹಣ ರಿಕವರಿ ಮಾಡಿಕೊಳ್ಳಲಾದ ಸಂಖ್ಯೆ. |
|---|---|---|---|
| 2023 | 67 | 79105284 | 16 |
| 2024 | 1066 | 1915542157 | 463 |
| 2025 | 95 | 201182786 | 20 |

**ಡಿಜಿಟಲ್ ಅರೆಸ್ಟ್ ವಂಚನೆಯ ಪ್ರಕರಣಗಳನ್ನು ಪರಿಣಾಮಕಾರಿಯಾಗಿ ನಿಯಂತ್ರಿಸಲು ಹಾಗೂ ತಡೆಗಟ್ಟಲು ಸರ್ಕಾರವು ಈ ಕೆಳಕಂಡ ಜಾಗೃತಿ ಕ್ರಮಗಳನ್ನು ಕೈಗೊಂಡಿರುತ್ತದೆ.**

- ಡಿಜಿಟಲ್ ಅರೆಸ್ಟ್ ವಂಚನೆಯ ಪ್ರಕರಣಗಳ ಬಗ್ಗೆ ಸಾಮಾಜಿಕ ಜಾಲತಾಣಗಳಾದ ಫೇಸ್‌ಬುಕ್, ವಾಟ್ಸ್‌ಆಪ್ ಹಾಗೂ ಟ್ವೀಟರ್‌ಗಳ ಮೂಲಕ ಸೈಬರ್ ಜಾಗೃತಿಯ ಸಂದೇಶಗಳನ್ನು ರವಾನಿಸುವ ಮೂಲಕ ಸಾರ್ವಜನಿಕರಲ್ಲಿ ಜಾಗೃತಿ ನೀಡಲಾಗುತ್ತಿದೆ.

- ಶಾಲಾ ಕಾಲೇಜುಗಳಿಗೆ, ಇತರ ಸಂಸ್ಥೆಗಳಿಗೆ ಭೇಟಿ ನೀಡಿ ವಿದ್ಯಾರ್ಥಿ ಹಾಗೂ ಸಾರ್ವಜನಿಕರುಗಳಿಗೆ ಡಿಜಿಟಲ್ ಅರೆಸ್ಟ್ ವಂಚನೆಯ ಬಗ್ಗೆ ಜಾಗೃತಿ ಮೂಡಿಸಲು ಜಾಗೃತಾ ಕಾರ್ಯಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.

- ಸಾರ್ವಜನಿಕರನ್ನು ಇಂತಹ ಅಪರಾಧಿಕ ಕೃತ್ಯಗಳ ಮೂಲಕ ವಂಚಿಸಲು ನಕಲಿ ಸಿಮ್‌ಕಾರ್ಡ್ ಹಾಗೂ ನಕಲಿ ಬ್ಯಾಂಕ್ ಖಾತೆಗಳನ್ನು ಮಾರಾಟಕ್ಕೆ ಬಳಸುವ ಸಾಮಾಜಿಕ ಜಾಲತಾಣಗಳಾದ ಫೇಸ್‌ಬುಕ್, ಟೆಲಿಗ್ರಾಂ, ಇತರೆ ಅಂತರ್ಜಾಲ ವೇದಿಕೆಗಳಲ್ಲಿ ಸಕ್ರಿಯವಾಗಿರುವ ಖಾತೆಗಳು ಹಾಗೂ ಗುಂಪುಗಳನ್ನು ಪತ್ತೆ ಹಚ್ಚಿ, 268 ಫೇಸ್‌ಬುಕ್ ಗುಂಪುಗಳು, 465 ಟೆಲಿಗ್ರಾಂ ಗುಂಪುಗಳು, 15 ಇನ್‌ಸ್ಟಾಗ್ರಾಂ ಖಾತೆಗಳು ಹಾಗೂ 61 ವಾಟ್ಸ್‌ಆಪ್ ಗುಂಪುಗಳನ್ನು ನಿಷ್ಕ್ರಿಯಗೊಳಿಸಲಾಗುತ್ತದೆ.

- ಸೈಬರ್ ವಂಚಕರು ವಿಡಿಯೋ/ ವಾಟ್ಸ್‌ಆಪ್ ಮೂಲಕ ಸಾರ್ವಜನಿಕರಿಗೆ ಕರೆ ಮಾಡಿ ನೀವು ಮನಿಲ್ಯಾಂಡರಿಂಗ್ ದಲ್ಲಿ ಮತ್ತು ಮಾದಕ ವಸ್ತು ಗಾಂಜಾ ಅಕ್ರಮ ಸಾಗಾಣಿಕೆ ಪ್ರಕರಣದಲ್ಲಿ ಭಾಗಿಯಾಗಿದ್ದೀರಿ ಅಂತಾ ಸಾರ್ವಜನಿಕರಿಗೆ ಭಯಪಡಿಸಿ ಅವರಿಂದ ಬ್ಯಾಂಕ್ ಖಾತೆ, ಆಧಾರ ಕಾರ್ಡ್ ಇತ್ಯಾದಿ ದಾಖಲೆಗಳನ್ನು ಪರಿಶೀಲನೆ ನೆಪದಲ್ಲಿ ಪಡೆದುಕೊಂಡು ಅವರಿಂದ ಹಣ ಪಡೆದು ವಂಚನೆ ಮಾಡುತ್ತಿದ್ದು, ಈ ಬಗ್ಗೆ ಸಾರ್ವಜನಿಕರಿಗೆ ಸೈಬರ್ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ.

- 'ಡಿಜಿಟಲ್ ಅರೆಸ್ಟ್' ಕುರಿತು ಸೋಷಿಯಲ್ ಮೀಡಿಯಾದಲ್ಲಿ/ದಿನಪತ್ರಿಗಳಲ್ಲಿ ಜಾಹೀರಾತು ನೀಡಿ ಸಾರ್ವಜನಿಕರು ಜಾಗೃತಿಯಿಂದ ಇರುವಂತೆ ಅರಿವು ಮೂಡಿಸಲಾಗುತ್ತಿದೆ.

- ಪ್ರಮುಖ ಮೊಬೈಲ್ ಸರ್ವೀಸ್ ಪ್ರೊವೈಡರ್‌ಗಳ ಮುಖಾಂತರ ಕರೆಗಳು ಸ್ವೀಕರಿಸುವ ಮೊದಲು ಸೈಬರ್ ಅಪರಾಧಗಳ ಕುರಿತು ಜಾಗೃತಿ ಮೂಡಿಸಲಾಗುತ್ತಿದೆ.

- ಕೇಂದ್ರ ಸರ್ಕಾರವು ಸಾರ್ವಜನಿಕರ ಅನುಕೂಲಕ್ಕಾಗಿ National Cyber Crime Reporting Portal ಅನ್ನು ಪ್ರಾರಂಭಿಸಿದ್ದು ಈ ಮೂಲಕ 1930 ಹಾಗು 112 ಸಹಾಯವಾಣಿಯನ್ನು ಸಾರ್ವಜನಿಕರಿಗೆ ಪ್ರಾರಂಭಿಸಲಾಗಿದ್ದು, ವಂಚನೆಗೆ ಒಳಗಾದವರು ಈ ಪೋರ್ಟಲ್ ಮೂಲಕ ಪ್ರಕರಣವನ್ನು ದಾಖಲಿಸಲು ಅವಕಾಶ ಕಲ್ಪಿಸಿಕೊಡಲಾಗಿರುತ್ತದೆ. ಪೋರ್ಟಲ್ ನಿಂದ ರವಾನೆಯಾದಂತಹ ದೂರುಗಳನ್ನು ಸೆನ್(CEN) ಪೊಲೀಸ್ ಠಾಣೆಗಳಲ್ಲಿ ಪರಿಶೀಲಿಸಿ ಸೂಕ್ತ ಕಾನೂನು ಕ್ರಮ ಕೈಗೊಳ್ಳಲಾಗುತ್ತಿದೆ.

- ರಾಜ್ಯದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ 43 ಸೆನ್(CEN) ಪೊಲೀಸ್ ಠಾಣೆಗಳ ಅಧಿಕಾರಿ ಹಾಗೂ ಸಿಬ್ಬಂದಿ ಸೇರಿದಂತೆ, 1063 ಪೊಲೀಸ್ ಠಾಣೆಗಳ ನುರಿತ ಅಧಿಕಾರಿ ಮತ್ತು ಸಿಬ್ಬಂದಿಗಳಿಗೆ ಸಿಐಡಿ ಸೈಬರ್ ಕ್ರೈಂ ಟ್ರೈನಿಂಗ್ ಸೆಂಟರ್‌ನಲ್ಲಿ ವಿಶೇಷ ತರಬೇತಿ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದೆ. ಈ ತರಬೇತಿ ಮೂಲಕ, ಡಿಜಿಟಲ್ ಅರೆಸ್ಟ್ ವಂಚನೆ ಪ್ರಕರಣಗಳ ಜೊತೆಗೆ ಎಲ್ಲಾ ರೀತಿಯ ಸೈಬರ್ ಅಪರಾಧ ಪ್ರಕರಣಗಳ ತನಿಖೆ ಹಾಗೂ ಅಪರಾಧ ತಡೆ ಬಗ್ಗೆ ಅಗತ್ಯ ಕಾರ್ಯಗಾರಗಳನ್ನು ಆಯೋಜಿಸಲಾಗುತ್ತಿರುತ್ತದೆ.

**ಸಂಖ್ಯೆ: HD 51 PCQ 2025**

(signature)

**(ಡಾ: ಜಿ. ಪರಮೇಶ್ವರ)**
ಗೃಹ ಸಚಿವರು